# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ

ನಂ. 09, 2ನೇ ಮಹಡಿ, 1ನೇ ಮುಖ್ಯರಸ್ತೆ, (ಹೊರವರ್ತುಲ ರಸ್ತೆ),ಕೆಂಗೇರಿ ಉಪನಗರ,ಬೆಂಗಳೂರು-60.

---

**ಸಂಖ್ಯೆ : ಸ.ಇಂ/ವಾ-130/ವಾರ್ಡ್‌ಸಭೆ/2020-21** **ದಿನಾಂಕ : 05/12/2020**

**ವಾರ್ಡ್-130ರ ವಾರ್ಡ್ ಸಭೆಯ ನಡವಳಿ.**

**ದಿನಾಂಕ: 05/12/2020 ರಂದು ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿಯ ನಡುವಳಿಗಳು**

**ಸಭೆಯಲ್ಲಿ ಹಾಜರಿದ್ದ ಅಧಿಕಾರಿ ನೌಕರರು ಮತ್ತು ಸದಸ್ಯರುಗಳು:**

| ಕ್ರ ಸಂ | ಸದಸ್ಯರ ಹೆಸರು/ಪದನಾಮ | ಪದನಾಮ |
|---|---|---|
| 1 | ಶ್ರೀ ಮುತ್ತುರಾಜ್ | ಮುಖ್ಯ ಲೆಕ್ಕ ಪರಿಶೋಧನಾಧಿಕಾರಿಗಳು<br>ನೋಡಲ್ ಅಧಿಕಾರಿ |
| 2 | ಶ್ರೀ ಶ್ರೀಧರ್.ಸಿ | ಸಹಾಯಕ ಇಂಜಿನಿಯರ್<br>ವಾರ್ಡ್-130 ಹಾಗೂ ಸದಸ್ಯ ಕಾರ್ಯದರ್ಶಿ |
| 3 | ಶ್ರೀ ನಾಗರಾಜ.ಎಲ್ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4 | ಶ್ರೀ ಡಿ.ವಿನಯ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 5 | ಶ್ರೀ ಅಶೋಕ್ ಗೌಡ | ಸಹಾಯಕ ಕಾರ್ಯಪಾಲಕ ಇಂಜಿನಿಯರ್<br>ಬಿ.ಡಬ್ಲ್ಯೂ.ಎಸ್.ಎಸ್.ಬಿ, ಕೆಂಗೇರಿ ಉಪ ವಿಭಾಗ |
| 6 | ಶ್ರೀ ಗವಿಸಿದ್ದಯ್ಯ | ಕಿರಿಯ ಅಭಿಯಂತರರು<br>(ಎಲೆಕ್ಟ್ರಿಕಲ್, ರಾರಾನಗರ) |
| 7 | ಶ್ರೀ ತಿಪ್ಪೇಸ್ವಾಮಿ ಬಿ.ಎಸ್ | ಗುತ್ತಿಗೆದಾರರು<br>ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 8 | ಶ್ರೀ ಶಬರಿನಾಥ್ | ಗುತ್ತಿಗೆದಾರರು<br>ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 9 | ಶ್ರೀ ನಿರಂಜನ್ ಬಿ.ಎಸ್ | ವಾರ್ಡ್ ಮಾಷಲ್ |
| 10 | ಡಾ॥ ಅನುಪಮ | ಪ್ರಾಥಮಿಕ ಆರೋಗ್ಯ ಕೇಂದ್ರ, ಉಲ್ಲಾಳ |
| 11 | ವಾರ್ಡ್ ಕಮಿಟಿ ಸದಸ್ಯರುಗಳು | ವಾರ್ಡ್-130 |

Scanned with CamScanner

ವಾರ್ಡ್ ನಂ.130 ಉಲ್ಲಾಳ ವಾರ್ಡ್‌ನ ಸಹಾಯಕ ಇಂಜಿನಿಯರ್ ಹಾಗೂ ಸದಸ್ಯ ಕಾರ್ಯದರ್ಶಿಯವರು ಸಭೆಯಲ್ಲಿ ಹಾಜರಿದ್ದ ಅಧಿಕಾರಿ ನೌಕರರು ಮತ್ತು ವಾರ್ಡ್ ಕಮಿಟಿ ಸದಸ್ಯರನ್ನು ಸ್ವಾಗತಿಸಿದರು.

ನೋಡಲ್ ಅಧಿಕಾರಿಗಳು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ವಾರ್ಡಿನ ವ್ಯಾಪ್ತಿಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸಭೆಯಲ್ಲಿ ಹಾಜರಿದ್ದ ನೌಕರರು ಮತ್ತು ವಾರ್ಡ್ ಕಮಿಟಿ ಸದಸ್ಯರುಗಳಿಂದ ಮಾಹಿತಿ ಪಡೆದರು.

ಸಭೆಯಲ್ಲಿ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಿದರು.

1) ವಾರ್ಡ್ ವ್ಯಾಪ್ತಿಯಲ್ಲಿ ಕಾವೇರಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಲಾಯಿತು (ಕ್ರಮ:– ಸಹಾಯಕ ಇಂಜಿನಿಯರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ).

2) ಬೀದಿ ದೀಪಗಳ ನಿರ್ವಹಣೆಯನ್ನು, ನಿಗಧಿತ ಸಮಯದಲ್ಲಿ ಆನ್ ಆಗಿ, ನಿಗಧಿತ ಸಮಯದಲ್ಲಿ ಸ್ವಿಚ್ ಆಫ್ ಆಗಲು ಅನುವಾಗುವಂತೆ ಟೈಮರ್‌ಗಳನ್ನು ಅಳವಡಿಸಲು ಕ್ರಮಹಿಸಲು ಹಿಂದಿನ ಸಭೆಯಲ್ಲಿ ಸೂಚಿಸಿದಂತೆ ಕ್ರಮ ವಹಿಸುವುದು (ಕ್ರಮ:– ಸಹಾಯಕ ಇಂಜಿನಿಯರ್, ವಿದ್ಯುತ್ ವಿಭಾಗ).

3) ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ರಸ್ತೆಗಳನ್ನು ಸ್ವಚ್ಛವಾಗಿಡಲು ಕ್ರಮ ವಹಿಸುವಂತೆ ಹಾಗೂ ದಿನನಿತ್ಯ ರಸ್ತೆ ಕಸ ಗುಡಿಸಲು ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ತಿಳಿಸಿದರು (ಕ್ರಮ:– ಕಿರಿಯ ಆರೋಗ್ಯ ಪರಿವೀಕ್ಷಕರು).

4) ವಾರ್ಡ್ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳ ಗುಣಮಟ್ಟ ಕಾಯ್ದುಕೊಂಡು ಕೆಲಸ ನಿರ್ವಹಿಸಲು ಸೂಚಿಸುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ರಸ್ತೆಗಳಲ್ಲಿ ಗುಂಡಿ ಮುಚ್ಚಲು ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು. ವಾರ್ಡ್ ವ್ಯಾಪ್ತಿಯಲ್ಲಿ ಹಾಲಿ ಪ್ರಗತಿಯಲ್ಲಿರುವ ಕಾಮಗಾರಿಗಳ ವಿವರ ಈ ಹಿಂದೆ ಅಭಿವೃದ್ಧಿಪಡಿಸಿರುವ ಬಡಾವಣೆಗಳಲ್ಲಿ ನಿರ್ವಹಿಸಿರುವ ಕಾಮಗಾರಿಗಳ ವಿವರಗಳನ್ನು ಸಭೆಗೆ ತಿಳಿಸಿದರು.

ಮುಂದುವರೆದು ವಾರ್ಡ್ ವ್ಯಾಪ್ತಿಯಲ್ಲಿ ವಿವಿಧ ಬಡಾವಣೆಗಳಲ್ಲಿ ಯಾವುದಾದರೂ ಕಾಮಗಾರಿ ಅವಶ್ಯಕತೆ ಇದ್ದಲ್ಲಿ ತಿಳಿಸುವಂತೆ ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳಿಗೆ ತಿಳಿಸಿದರು (ಕ್ರಮ:– ವಾರ್ಡ್ ಇಂಜಿನಿಯರ್).

5) ಉಲ್ಲಾಳ ವಾರ್ಡ್‌ನ ಶಿರ್ಕೆ ಅಪಾರ್ಟ್‌ಮೆಂಟ್ ಮುಂಭಾಗ ರಿಂಗ್ ರಸ್ತೆಯಲ್ಲಿ ರೋಡ್ ಹಂಪ್ಸ್ ಮತ್ತು ರಸ್ತೆ ವಿಭಜಕಗಳನ್ನು ಅಳವಡಿಸುವ ಬಗ್ಗೆ ಈಗಾಗಲೇ ಪಾಲಿಕೆಯ ಟ್ರಾಫಿಕ್ ಇಂಜಿನಿಯರ್

Scanned with CamScanner

ಸೆಲ್ ವಿಭಾಗಕ್ಕೆ ಪತ್ರ ವ್ಯವಹಾರ ಮಾಡಿರುವುದಾಗಿ ವಾರ್ಡ್ ಇಂಜಿನಿಯರ್‌ರವರು ಸಭೆಗೆ ತಿಳಿಸಿದರು (ಕ್ರಮ:- ಟ್ರ್ಯಾಫಿಕ್ ಇಂಜಿಯನಿರ್ ಸೆಲ್).

6) ಉಲ್ಲಾಳ ವಾರ್ಡ್ ನಂ.130ರ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆ ಕಲಿಸಲು ಅವಶ್ಯವಿರುವ ಬಡಾವಣೆಗಳಲ್ಲಿನ ರಸ್ತೆಯ ವಿವರಗಳನ್ನು ಸದಸ್ಯಕಾರ್ಯದರ್ಶಿಯವರಿಗೆ ಒದಗಿಸುವಂತೆ ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳಿಗೆ ನೋಡಲ್ ಅಧಿಕಾರಿಗಳು ತಿಳಿಸಿದರು. ಸದರಿ ವಿವರಗಳನ್ನು ಪರಿಷ್ಕರಿಸಿ ಅಗತ್ಯ ಕ್ರಮ ವಹಿಸಲು ಬೆಂ ಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯವರ ಜೊತೆ ಪತ್ರ ವ್ಯವಹಾರ ಮಾಡಲು ಸದಸ್ಯ ಕಾರ್ಯದರ್ಶಿಯವರಿಗೆ ತಿಳಿಸಲಾಯಿತು (ಕ್ರಮ:- ವಾರ್ಡ್ ಇಂಜಿನಿಯರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ).

7) ಜ್ಞಾನಭಾರತಿ ಬಡಾವಣೆಯ ಮೊದಲನೇ ಬ್ಲಾಕ್‌ನಲ್ಲಿ ಬೀದಿ ದೀಪಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸಲು ಸೂಚಿಸಲಾಯಿತು (ಕ್ರಮ:- ಕಿರಿಯ ಇಂಜಿನಿಯರ್, ವಿದ್ಯುತ್).

8) ಪಾಲಿಕೆಯ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೆಯವರು ರಸ್ತೆ ಬದಿಯ ಮರಗಳನ್ನು ಟ್ರಿಮ್ ಮಾಡುತ್ತಿದ್ದು, ಮರದ ರೆಂಬೆಗಳನ್ನು ಸಾಗಿಸದೇ ರಸ್ತೆ ಬದಿಯಲ್ಲೇ ಬಿಡುವುದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವುದಾಗಿ ದೂರುಗಳು ಬರುತ್ತಿರುವುದರಿಂದ ಕತ್ತರಿಸಿದ ಕೊಂಬೆಗಳನ್ನು ತಕ್ಷಣವೇ ತೆರವುಗೊಳಿಸುವಂತೆ ಸೂಚಿಸಲಾಯಿತು ಹಾಗೂ ತೆಗೆದುಕೊಂಡ ಕ್ರಮದ ಬಗ್ಗೆ ಮುಂದಿನ ಸಭೆಯಲ್ಲಿ ವರದಿ ಮಾಡುವಂತೆ ತಿಳಿಸಲಾಯಿತು (ಕ್ರಮ:- ಇಂಜಿನಿಯರ್, ಬೆಸ್ಕಾಂ).

ಅಂತಿಮವಾಗಿ ವಾರ್ಡ್‌ನ ಎಲ್ಲಾ ವಾರ್ಡ್ ಕಮಿಟಿಯ ಸದಸ್ಯರುಗಳ ಮತ್ತು ವಿವಿಧ ಸಂಘ ಸಂಸ್ಥೆಗಳು ಜೊತೆಗೂಡಿ ಸಮನ್ವಯ ಸಾಧಿಸಿ ಕುಂದು ಕೊರತೆಗಳನ್ನು ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಎಲ್ಲಾ ಅಧಿಕಾರಿ ವರ್ಗದವರಿಗೆ ಸೂಚಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಮುತ್ತುರಾಜ್)
ಮುಖ್ಯ ಲೆಕ್ಕ ಪರಿಶೋಧನಾಧಿಕಾರಿಗಳು
ಹಾಗೂ ನೋಡಲ್ ಅಧಿಕಾರಿ,
ವಾರ್ಡ್‌ನಂ.130, ಉಲ್ಲಾಳ
ಕೆಂಗೇರಿ ಉಪ ವಿಭಾಗ
ಬಿ.ಬಿ.ಎಂ.ಪಿ.,ಬೆಂಗಳೂರು.

<u>ಪ್ರತಿಯನ್ನು:</u>

1) ವಲಯ ಆಯುಕ್ತರು ಹಾಗೂ ವಿಶೇಷ ಆಯುಕ್ತರು(ಆಡಳಿತ) ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ತರಲು ಅವರ ಆಪ್ತ ಸಹಾಯಕರಿಗೆ ಸಲ್ಲಿಸಿದೆ.
2) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ.

Scanned with CamScanner

4) ಕಾರ್ಯಪಾಲಕ ಅಭಿಯಂತರರು, ಕೆಂಗೇರಿ ವಿಭಾಗ ರವರ ಮಾಹಿತಿಗಾಗಿ ಕಳುಹಿಸಿದೆ.

5) ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆಂ.ಉ.ವಿ/ ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ(ಯಶವಂತಪುರ) ರವರ ಮಾಹಿತಿಗಾಗಿ ಕಳುಹಿಸಿದೆ.

6) ಎಲ್ಲಾ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.

7) ಕಛೇರಿ ಪ್ರತಿ

Scanned with CamScanner